ಕರ್ನಾಟಕ ವಿಧಾನ ಪರಿಷತ್ತು

01 ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1141 (1335)

02 ಸದಸ್ಯರ ಹೆಸರು : ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)

03 ಉತ್ತರಿಸುವ ದಿನಾಂಕ : 21.12.2018

04 ಉತ್ತರಿಸುವ ಸಚಿವರು : ಗೃಹ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಬೆಂಗಳೂರು ನಗರದ ಮಾರತ್‌ಹಳ್ಳಿ, ಜಕ್ಕಸಂದ್ರ, ಸರ್ಜಾಪುರ, ಬೆಳ್ಳಂದೂರು, ದೇವರ ಬೀಸನಹಳ್ಳಿ, ಕಾಡು ಬೀಸನಹಳ್ಳಿ ಮುಂತಾದ ಕಡೆಗಳಲ್ಲಿ ಅಕ್ರಮವಾಗಿ ದೇಶ ಪ್ರವೇಶಿಸಿ ವಾಸಿಸುತ್ತಿರುವ ಬಾಂಗ್ಲಾದೇಶಿಯರ ಕ್ಯಾಂಪ್‌ಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು. ಬೆಂಗಳೂರು ನಗರದ ವೈಟ್‌ಫೀಲ್ಡ್ ವಿಭಾಗದ ವ್ಯಾಪ್ತಿಗೆ ಒಳಪಡುವ ಮಾರತ್‌ಹಳ್ಳಿ, ಸರ್ಜಾಪುರ ರಸ್ತೆ, ಬೆಳ್ಳಂದೂರು, ದೇವರ ಬೀಸನಹಳ್ಳಿ, ಕಾಡು ಬೀಸನಹಳ್ಳಿ ಹಾಗೂ ಇನ್ನಿತರ ಪ್ರದೇಶಗಳಲ್ಲಿ ಅಕ್ರಮವಾಗಿ ವಾಸ ಮಾಡುತ್ತಿರುವ ಬಾಂಗ್ಲಾದೇಶಿಯರನ್ನು ಗುರುತಿಸಲು ತಹಶೀಲ್ದಾರ್ ಕಚೇರಿಯ ಅಧಿಕಾರಿಗಳು ಹಾಗೂ ಬಿಬಿಎಂಪಿ ಅಧಿಕಾರಿಗಳನ್ನೊಳಗೊಂಡ ಸಭೆಯನ್ನು ದಿನಾಂಕ: 04.01.2018ರಂದು ಉಪ ಪೊಲೀಸ್ ಆಯುಕ್ತರು, ವೈಟ್‌ಫೀಲ್ಡ್ ವಿಭಾಗದ ಕಚೇರಿಯಲ್ಲಿ ಸಭೆ ನಡೆಸಿ ಬಾಂಗ್ಲಾದೇಶಿಯರನ್ನು ಗುರುತಿಸಲು ಕ್ರಮ ಕೈಗೊಳ್ಳಲು ಸೂಕ್ತ ಸೂಚನೆಗಳನ್ನು ನೀಡಲಾಗಿರುತ್ತದೆ ಸರ್ಕಾರದ ಪತ್ರ ಸಂಖ್ಯೆ: ಒಇ/೧೭/ಪಿಬಿಡಿ/2015, ದಿನಾಂಕ: 01.01.2016ರ ಆದೇಶದಂತೆ, ಬೆಂಗಳೂರು ನಗರದ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಅಕ್ರಮವಾಗಿ ವಾಸವಿರುವ ಬಾಂಗ್ಲಾ ವಲಸಿಗರನ್ನು ಪತ್ತೆ ಹಚ್ಚಿ ಗಡಿಪಾರು ಮಾಡುವ ಸಲುವಾಗಿ Special Task Force ಅನ್ನು ರಚಿಸಿ ಕ್ರಮ ಕೈಗೊಳ್ಳಲಾಗುತ್ತಿದೆ.
ಆ)	ಬೆಂಗಳೂರು ನಗರದಲ್ಲಿ ವಾಸಿಸುತ್ತಿರುವ ಅಕ್ರಮ ವಲಸಿಗರಾದ ಬಾಂಗ್ಲಾದೇಶಿಗಳು ಸರ್ಕಾರದ ಸೌಲಭ್ಯಗಳನ್ನು ಅನಧಿಕೃತವಾಗಿ ಬಳಸುತ್ತಿದ್ದು ಇದಕ್ಕೆ ಯಾವುದೇ ರೀತಿಯ ತೆರಿಗೆ ಪಾವತಿಸುತ್ತಿಲ್ಲವಾದ್ದರಿಂದ ಕನ್ನಡಿಗರಿಗೆ ಅನ್ಯಾಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಇಂತಹ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. ಕಂಡುಬಂದಲ್ಲಿ ಸೂಕ್ತ ಕಾನೂನುಕ್ರಮ ಕೈಗೊಳ್ಳಲಾಗುವುದು.
ಇ)	ಅಕ್ರಮವಾಗಿ ನೆಲೆಸಿರುವ ಬಾಂಗ್ಲಾದೇಶಿಯರು ಸ್ಥಳೀಯವಾಗಿ ಲಭ್ಯವಿರುವ ಶ್ರಮಜೀವಿ ಕೆಲಸಗಳನ್ನು ಕಡಿಮೆ ಕೂಲಿಗೆ ಮಾಡುತ್ತಿರುವುದರಿಂದ ಕನ್ನಡಿಗರಿಗೆ ಸಣ್ಣಪುಟ್ಟ ಕೆಲಸಗಳು ಲಭ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	

<table>
<tr>
<td>ಈ)</td>
<td>ಅಕ್ರಮ ವಲಸಿಗರು ಬೆಂಗಳೂರಿನಲ್ಲಿ ನೆಲೆಸಿ ಕೊಲೆ ದರೋಡೆ ಮತ್ತಿತರ ಪ್ರಕರಣಗಳನ್ನು ನಡೆಸಿ ಬಳಿಕ ತಮ್ಮ ತವರಿಗೆ ಹೋಗುತ್ತಿರುವುದರಿಂದ ಹಲವಾರು ಕೊಲೆ ಪ್ರಕರಣಗಳು ಇದುವರೆಗೂ ಪತ್ತೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಅಕ್ರಮ ಬಾಂಗ್ಲಾ ವಲಸಿಗರ ಬಗ್ಗೆ ಸರ್ಕಾರದ ನಿಲುವೇನು?</td>
<td>ಬೆಂಗಳೂರು ನಗರದ ಪೊಲೀಸ್ ಠಾಣೆಗಳಲ್ಲಿ ಕಳೆದ ಮೂರು ವರ್ಷಗಳ್ಲಿ ಅಪರಾಧ ಪ್ರಕರಣಗಳಲ್ಲಿ ಭಾಗಿಯಾಗಿರುವ ಬಾಂಗ್ಲಾದೇಶಿಯರ ವಿರುದ್ದ ಒಟ್ಟು ೩೭ ಪ್ರಕರಣಗಳನ್ನು ದಾಖಲಿಸಿದ್ದು, ಪೊಲೀಸ್ ಠಾಣಾ ವಿವರಗಳನ್ನು ಅನುಬಂಧ-ಅ ದಲ್ಲಿ ನೀಡಲಾಗಿದೆ. ವರ್ಷವಾರು ವಿವರ ಈ ಕೆಳಕಂಡಂತಿದೆ.
<table>
<tr><th>ಕ್ರ.ಸಂ.</th><th>ವರ್ಷ</th><th>ದಾಖಲಾದ ಪ್ರಕರಣಗಳ ಸಂಖ್ಯೆ</th></tr>
<tr><td>1</td><td>2016</td><td>16</td></tr>
<tr><td>2</td><td>2017</td><td>6</td></tr>
<tr><td>3</td><td>2018</td><td>15</td></tr>
<tr><td></td><td>ಒಟ್ಟು</td><td>37</td></tr>
</table>
</td>
</tr>
</table>

ಸಂಖ್ಯೆ: ಒಇ 219 ಪಿಎಂಎಸ್ 2020

(ಬಸವರಾಜ ಬೊಮ್ಮಾಯಿ)
ಗೃಹ ಸಚಿವರು